ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ-೧೪

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನೆಯ ಅಧಿವೇಶನ

## (ಮುಂದುವರೆದ ಉಪವೇಶನ)

## ಮಂಗಳವಾರ, ದಿನಾಂಕ ೫ನೇ ಜುಲೈ, ೨೦೧೬

---

### ಸಮೂಹ – II

೧. ಇಂಧನ ಸಚಿವರು

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೩. ಸಹಕಾರ ಮತ್ತು ಸಕ್ಕರೆ ಸಚಿವರು

೪. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೫. ಕೃಷಿ ಸಚಿವರು

೬. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು

೭. ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು

---

### ಸಫಾಯಿ ಪೌರಕಾರ್ಮಿಕರಿಗೆ ಕನಿಷ್ಠ ವೇತನ ನೀಡುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೬ (೧೬೭೨) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಮುಂತಾದ ಸ್ಥಳೀಯ ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಸಫಾಯಿ ಪೌರಕಾರ್ಮಿಕರು ತೀರ ಕನಿಷ್ಟ ವೇತನ ಪಡೆಯುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಇವರ ಜೀವನ ಮಟ್ಟ ಸುಧಾರಿಸುವ ನಿಟ್ಟಿನಲ್ಲಿ ಇವರ ವೇತನ ಭತ್ಯೆಗಳನ್ನು ಪರಿಷ್ಕರಿಸುವ ವಿಚಾರ ಸರ್ಕಾರದ ಮುಂದಿದೆಯೇ;

(ಇ) ಇವರ ವೇತನ ಭತ್ಯೆಗಳನ್ನು ಯಾವ ಪ್ರಮಾಣದಲ್ಲಿ ಪರಿಷ್ಕರಿಸುವಿರಿ, ಮಾಸಿಕವಾಗಿ ಎಷ್ಟು ಕನಿಷ್ಟ ವೇತನವನ್ನು ನಿಗದಿಪಡಿಸಲು ನಿರ್ಧರಿಸಲಾಗಿದೆ; (ವಿವರ ನೀಡುವುದು)

(ಈ) ಸಫಾಯಿ ಪೌರಕಾರ್ಮಿಕರನ್ನು ಅಭಿವೃದ್ಧಿಪಡಿಸಲು ಸರ್ಕಾರವು ಯಾವ ಕ್ರಮ ಕೈಗೊಳ್ಳುವುದು; ಕಾರ್ಯಗತಗೊಳ್ಳುವುದು ಯಾವಾಗ?

## ರೈತ ಸಂಪರ್ಕ ಕೇಂದ್ರಗಳ ಮೂಲಕ ಕೃಷಿಕರಿಗೆ ತಾಡಪಲ್‌ಗಳನ್ನು ಸಬ್ಸಿಡಿ ಬೆಲೆಯಲ್ಲಿ ವಿತರಿಸುವ ಕುರಿತು

**ಶ್ರೀ ಎಸ್.ವ್ವಿ. ಸಂಕನೂರ (ಪದವೀಧರರ ಕ್ಷೇತ್ರ) –**

೧೯೭ (೧೭೧೮) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ರೈತರಿಗೆ ರೈತ ಸಂಪರ್ಕ ಕೇಂದ್ರಗಳ ಕುರಿತು ಸಬ್ಸಿಡಿ ದರದಲ್ಲಿ ತಾಡಪಲ್ ವಿತರಿಸುತ್ತಿರುವುದು ನಿಜವೇ; ಹಾಗಿದ್ದಲ್ಲಿ, ೨೦೧೫–೧೬ನೇ ಸಾಲಿನಲ್ಲಿ ರಾಜ್ಯದ ಯಾವ ಯಾವ ಜಿಲ್ಲೆಗಳಿಗೆ ಎಷ್ಟು ಸಂಖ್ಯೆಯಲ್ಲಿ ತಾಡಪಲ್‌ಗಳನ್ನು ಯಾವ ದರದಲ್ಲಿ ವಿತರಿಸಲಾಗಿದೆ; (ವಿವರ ನೀಡುವುದು)

(ಆ) ಈ ತಾಡಪಲ್‌ಗಳಿಗೆ ರೈತರಿಂದ ಹೆಚ್ಚಿನ ಬೇಡಿಕೆ ಇರುವುದು ನಿಜವೇ; ಹಾಗಿದ್ದಲ್ಲಿ, ಪ್ರಸಕ್ತ ವರ್ಷ ಬೇಡಿಕೆ ಇರುವ ಜಿಲ್ಲೆಗಳಿಗೆ ಕಳೆದ ವರ್ಷಕ್ಕಿಂತ ಈ ವರ್ಷ ಹೆಚ್ಚಿನ ಸಂಖ್ಯೆಯಲ್ಲಿ ತಾಡಪಲ್‌ಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುವುದೇ?

## ಕಬ್ಬು ಬೆಳೆಗಾರರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೮ (೧೬೭೭) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಬ್ಬು ಬೆಳೆಗಾರರಿಗೆ ರಾಜ್ಯ ಸರ್ಕಾರ ನೀಡಿರುವ ವಿವಿಧ ಸೌಲಭ್ಯಗಳೇನು; ಕಬ್ಬು ಬೆಳೆಗಾರರ ಸಾಲದ ಮೇಲಿನ ಬಡ್ಡಿಯನ್ನು ಮನ್ನಾ ಮಾಡಲು ಸರ್ಕಾರ ಉದ್ದೇಶಿಸಿದೆಯೇ; ಯಾವಾಗಿನಿಂದ ಜಾರಿಗೆ ತರಲಾಗುವುದು;

(ಆ) ಅದೇ ರೀತಿ ಸಾಲದ ಮರುಪಾವತಿ ಅವಧಿಯನ್ನು ವಿಸ್ತರಿಸುವ ಇರಾದೇ ಸರ್ಕಾರದ ಮುಂದಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು;

(ಇ) ಕಬ್ಬಿನಿಂದ ಎಥೆನಾಲ್ ಉತ್ಪಾದನೆಗೆ ಮುಕ್ತ ಅವಕಾಶ ನೀಡದಿರಲು ಕಾರಣಗಳೇನು; ಮುಕ್ತ ಅವಕಾಶ ನೀಡುವುದರಿಂದ ಸರ್ಕಾರಕ್ಕಿರುವ ತೊಂದರೆಗಳೇನು;

(ಈ) ಸದರಿ ಕಾರ್ಖಾನೆಗಳಿಂದ ಉತ್ಪಾದನೆಯಾಗುವ ಸಕ್ಕರೆಯ ಖರೀದಿಗೆ ಅನುಸರಿಸುವ ಮಾನದಂಡಗಳೇನು?

## ರಾಜ್ಯದಲ್ಲಿನ ಟೋಲ್‌ಗಳ ಸಂಖ್ಯೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೯೯ (೧೭೧೫) ಲೋಕೋಪಯೋಗಿ, ಬಂದರು ಮತ್ತು ಒಳನಾಡು, ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರಸ್ತೆ ಟೋಲ್‌ಗಳ ಸಂಖ್ಯೆ ಎಷ್ಟು; ಅವು ಯಾವುವು;

(ಆ) ಇವುಗಳನ್ನು ಯಾವ ಸಂಸ್ಥೆಯವರು ನಿರ್ವಹಿಸುತ್ತಿದ್ದಾರೆ; ಟೋಲ್‌ವಾರು ವಿವರವಾದ ಮಾಹಿತಿ ನೀಡುವುದು;

(ಇ) ಆಂಬುಲೆನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ಪ್ರತ್ಯೇಕ ದ್ವಾರ ನಿರ್ಮಿಸಿದ್ದಾರೆಯೇ;

(ಈ) ನಿರ್ಮಿಸಿದ್ದರೆ, ಟೋಲ್‌ವಾರು ವಿವರವಾದ ಮಾಹಿತಿ ಕೊಡುವುದು;

(ಉ) ನಿರ್ಮಿಸದಿದ್ದರೆ, ಯಾವಾಗ ನಿರ್ಮಿಸಲಾಗುವುದು?

## ಬೆಸ್ಕಾಂ ಸಂಸ್ಥೆಯಲ್ಲಿ ಆದಾಯ ಸೋರಿಕೆ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೦೦ (೧೭೪೯) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಸ್ಕಾಂ ಸಂಸ್ಥೆಯ ಪೀಣ್ಯ ಸಬ್ ಡಿವಿಷನ್ (North-4) ಮತ್ತು ಎಲೆಕ್ಟ್ರಾನಿಕ್ಸ್ ಸಿಟಿ ಸಬ್ ಡಿವಿಷನ್‌ನ ಅಧಿಕಾರಿಗಳು ಕಳೆದ ಮೂರು ವರ್ಷಗಳಲ್ಲಿ ತಮ್ಮ ಸರಹದ್ದುಗಳಲ್ಲಿನ ಗ್ರಾಹಕರಿಗೆ/ಕೈಗಾರಿಕೋದ್ಯಮಿಗಳಿಗೆ ಹೊಸದಾಗಿ ಮತ್ತು ಹೆಚ್ಚುವರಿ ವಿದ್ಯುತ್ (Additional Load) ಸಂಪರ್ಕಗಳನ್ನು ಕಲ್ಪಿಸಿದ್ದಾರೆಯೇ;

(ಆ) ನಿಗಧಿಪಡಿಸಿದ ದರದಂತೆ ಈ ಸಂಪರ್ಕಗಳಿಗೆ ಎಷ್ಟು ಅಭಿವೃದ್ಧಿ ಶುಲ್ಕವನ್ನು ವಸೂಲು ಮಾಡಬೇಕಿತ್ತು; ಎಷ್ಟು ಶುಲ್ಕವನ್ನು ಅಧಿಕಾರಿಗಳು ವಸೂಲು ಮಾಡಿದ್ದಾರೆ;

(ಇ) ಸರಹದ್ದಿನ ಗ್ರಾಹಕರು ಕೈಗಾರಿಕೋದ್ಯಮಿಗಳು ಮತ್ತು ಗುತ್ತಿಗೆದಾರರ ಜೊತೆ ಶಾಮೀಲಾಗಿ ವಸೂಲು ಮಾಡಿದ "ಅಭಿವೃದ್ಧಿ ಶುಲ್ಕ"ವನ್ನು ಸಂಸ್ಥೆಯ ಲೆಕ್ಕಕ್ಕೆ ಕಡಿಮೆ ತೋರಿಸಿ, ಹೆಚ್ಚಿನ ಹಣವನ್ನು ಪಡೆದು ಸಂಸ್ಥೆಯ ಬೊಕ್ಕಸಕ್ಕೆ ಕೋಟ್ಯಾಂತರ ರೂ.ಗಳ ನಷ್ಟ ಮಾಡುತ್ತಿರುವ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಬಾರದಿದ್ದಲ್ಲಿ, ಸರ್ಕಾರ ತನಿಖೆಗೆ ಆದೇಶಿಸುವುದೇ;

(ಉ) ಎಷ್ಟು ಚದುರಡಿ ನಿರ್ಮಾಣದ ಗೃಹ, ವಾಣಿಜ್ಯ ಮತ್ತು ಕೈಗಾರಿಕಾ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಕಡ್ಡಾಯವಾಗಿ ಟ್ರಾನ್ಸ್ ಫಾರ್ಮ್‌ರ್ ಅನ್ನು ಹಾಕಬೇಕು;

(ಊ) ಬೆಸ್ಕಾಂ ಸಂಸ್ಥೆಯ ರಾಜಾಜಿನಗರ ಸಬ್ ಡಿವಿಷನ್ (North-4) ಅಧಿಕಾರಿಗಳು ಗ್ರಾಹಕರು ಮತ್ತು ಗುತ್ತಿಗೆದಾರರೊಡನೆ ಶಾಮೀಲಾಗಿ ಲಕ್ಷಾಂತರ ರೂ.ಗಳ ಲಂಚ ಪಡೆದು ನಿಗದಿತ ವಿಸ್ತೀರ್ಣಕ್ಕಿಂತ ಹೆಚ್ಚು ವಿಸ್ತೀರ್ಣದ ಕಟ್ಟಡ ನಿರ್ಮಾಣ ಮಾಡಿದ್ದರೂ, ಟ್ರಾನ್ಸ್ ಫಾರ್ಮರ್ ಹಾಕದೆ ವಿದ್ಯುತ್ ಸಂಪರ್ಕಗಳನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಋ) ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು, ಬಾರದಿದ್ದಲ್ಲಿ, ತನಿಖೆಗೆ ಸರ್ಕಾರ ಆದೇಶಿಸುವುದೇ?

## ೨೦೧೪ ರಿಂದ ೨೦೧೬ರಲ್ಲಿ ರಾಜ್ಯದಲ್ಲಿ ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡಿರುವವರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೨೦೧ (೧೭೫೧) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೪–೧೫ ಮತ್ತು ೨೦೧೫–೧೬ರಲ್ಲಿ ರಾಜ್ಯದಲ್ಲಿ ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; ಯಾವ ಯಾವ ಜಿಲ್ಲೆಗಳಲ್ಲಿ ಆತ್ಮಹತ್ಯೆ ಮಾಡಿಕೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ರೈತರ ಆತ್ಮಹತ್ಯೆಯನ್ನು ತಡೆಯಲು ಕೃಷಿ ಇಲಾಖೆ ಕೈಗೊಂಡ ಕ್ರಮಗಳೇನು, ಇದನ್ನು ನಿಯಂತ್ರಿಸಲು ಇಲಾಖೆ ಕೈಗೊಂಡ ಕ್ರಮಕ್ಕೆ ಸ್ಪಂದನೆ ಸಿಕ್ಕಿದೆಯೇ; (ವಿವರ ನೀಡುವುದು)

(ಇ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಆತ್ಮಹತ್ಯೆಗೆ ಒಳಗಾದ ರೈತರಿಗೆ ನೀಡಿದ ಒಟ್ಟು ಪರಿಹಾರಧನ ಎಷ್ಟು, ಬಾಕಿ ಇರುವ ಪ್ರಕರಣಗಳೆಷ್ಟು; (ವಿವರ ನೀಡುವುದು)

(ಈ) ಆತ್ಮಹತ್ಯೆಗೆ ಒಳಗಾದ ಕುಟುಂಬದ ಸದಸ್ಯರಿಗೆ ಪರಿಹಾರ ಧನ ಅಲ್ಲದೇ ವಿಶೇಷ ಪ್ಯಾಕೇಜನ್ನು ನೀಡಲಾಗುವುದೇ; (ವಿವರ ನೀಡುವುದು)

(ಉ) ರೈತರ ಆತ್ಮಹತ್ಯೆಯನ್ನು ಸಂಪೂರ್ಣವಾಗಿ ತಡೆಗಟ್ಟಲು ಇಲಾಖೆ ಮುಂದಿರುವ ಯೋಜನೆಗಳಾವುವು ? (ವಿವರ ನೀಡುವುದು)

## ವಿದ್ಯುತ್ ಉತ್ಪಾದನೆ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೨ (೧೬೬೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆ, ಶಕ್ತಿನಗರದಲ್ಲಿರುವ ವಿದ್ಯುತ್ ಉತ್ಪಾದನಾ ಕೇಂದ್ರದಲ್ಲಿ ಪ್ರತಿ ದಿನ ಎಷ್ಟು ವಿದ್ಯುತ್ ಉತ್ಪಾದನೆಯಾಗುತ್ತಿದೆ ಮತ್ತು ಎಷ್ಟು ಬಳಕೆಯಾಗುತ್ತಿದೆ; (ವಿವರ ಒದಗಿಸುವುದು)

(ಆ) ವಿದ್ಯುತ್ ಉತ್ಪಾದನಾ ಘಟಕಗಳಲ್ಲಿ ಉತ್ಪಾದನೆ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಷ್ಟ್ರೀಯ ಹೆದ್ದಾರಿ ಸಂಖ್ಯೆ–೧೩ ದಕ್ಷಿಣ ಕನ್ನಡ ಜಿಲ್ಲೆಯ ಸೀಮೆ ಹಾಗೂ ಕೆರೆಕಟ್ಟೆ–ನೆಮ್ಮೂರ ನಡುವೆ ರಸ್ತೆ ಕಿರಿದಾಗಿದ್ದು ರಸ್ತೆ ಅಗಲೀಕರಣ ಕುರಿತು

**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೦೩ (೧೫೬೪) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರ್ಕಳ ಹಾಗೂ ದಕ್ಷಿಣ ಕನ್ನಡ, ಕೆರೆಕಟ್ಟೆ–ನೆಮ್ಮೂರ ಮೂಲಕ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ: ೧೩, ದಕ್ಷಿಣ ಕನ್ನಡ ಜಿಲ್ಲೆಯ ಸೀಮೆ ಹಾಗೂ ನೆಮ್ಮೂರ ನಡುವೆ ಅತ್ಯಂತ ಕಿರಿದಾಗಿದ್ದು, ಈ ಮಾರ್ಗದಲ್ಲಿ ವಾಹನ ದಟ್ಟಣೆ ನಿಬಿಡವಾಗಿರುವುದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಾರ್ವಜನಿಕರಿಗೆ ಅನುಕೂಲವಾಗುವಂತೆ ಈ ರಸ್ತೆಯನ್ನು ಅಗಲೀಕರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ರಾಗಿ ಮತ್ತು ಭತ್ತದ ಬೆಳೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೦೪ (೧೬೩೮) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಎಕರೆ ಭೂಮಿಯಲ್ಲಿ ರಾಗಿ ಮತ್ತು ಭತ್ತವನ್ನು ಬೆಳೆಯಲಾಗುತ್ತಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈಗ ಬೆಳೆಯುತ್ತಿರುವ ಸದರಿ ಕೃಷಿಯಲ್ಲಿ, ಎಷ್ಟು ಎಕರೆ ಭೂಮಿಯಲ್ಲಿ ರಾಗಿ ಕೃಷಿಯಲ್ಲಿ ಕಟಾವು ಯಂತ್ರವನ್ನು ಬಳಸಲಾಗುತ್ತಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಅದೇ ರೀತಿ ಎಷ್ಟು ಎಕರೆ ಭತ್ತದ ಕೃಷಿಯಲ್ಲಿ ನಾಟಿ ಯಂತ್ರವನ್ನು ಬಳಸಲಾಗುತ್ತಿದೆ;

(ಈ) ಕಟಾವು ಯಂತ್ರ ಮತ್ತು ನಾಟಿ ಯಂತ್ರ ಬಳಸಿದಲ್ಲಿ, ನಿವ್ವಳ ಆದಾಯದಲ್ಲಿ ಹೆಚ್ಚಳವುಂಟಾಗುವುದು ನಿಜವೇ; (ವಿವರ ನೀಡುವುದು)

(ಉ) ಉತ್ಪಾದನಾ ವೆಚ್ಚದ ವ್ಯತ್ಯಾಸದ ವಿವರ ನೀಡುವುದು?

## ಕೃಷಿ ಇಲಾಖೆಯ ಯೋಜನೆಗಳ ಬಗ್ಗೆ ಮತ್ತು ರೈತರ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೫ (೧೭೦೦) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರೈತರ ಸಂಕಷ್ಟ ನಿವಾರಣೆಗಾಗಿ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಕರ್ನಾಟಕ ರಾಜ್ಯ ಕೃಷಿ ಮತ್ತು ರೈತರ ಕಲ್ಯಾಣ ಸಮಿತಿ ರಚಿಸಲಾಗಿದ್ದು, ಈ ಮೂಲಕ ಸಮಿತಿಯ ವತಿಯಿಂದ ಯಾವ್ಯಾವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ; ಆ ಕಾರ್ಯಕ್ರಮಗಳು ಯಾವ ಹಂತದಲ್ಲಿವೆ;

(ಆ) "ಸುವರ್ಣ ಕೃಷಿ ಗ್ರಾಮ" ಯೋಜನೆಯಡಿ ಸರ್ಕಾರ ನೂರಾರು ಮಾದರಿ ಕೃಷಿ ಗ್ರಾಮಗಳನ್ನು ಅಭಿವೃದ್ಧಿಪಡಿಸುವ ಗುರಿ ಹೊಂದಿದ್ದು ಬೆಂಗಳೂರು ಜಿಲ್ಲೆಯಿಂದ ಯಾವ ಯಾವ ಗ್ರಾಮಗಳನ್ನು ಆಯ್ದುಕೊಳ್ಳಲಾಗಿದೆ;

(ಇ) ಈ ಯೋಜನೆಗೆ ಸರ್ಕಾರದಿಂದ ಇಲ್ಲಿಯವರೆಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಯೋಜನೆಯಡಿ ಕೈಗೆತ್ತಿಕೊಂಡಿರುವ ಕಾರ್ಯಗಳು ಯಾವ ಹಂತದಲ್ಲಿವೆ; (ಸಂಪೂರ್ಣ ವಿವರ ನೀಡುವುದು)

(ಈ) ಬೆಂಗಳೂರು ಜಿಲ್ಲೆ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ರೈತ ಸಂಪರ್ಕ ಕೇಂದ್ರಗಳಿವೆ ಮತ್ತು ಮುಂದಿನ ದಿನಗಳಲ್ಲಿ ಇನ್ನೂ ಎಷ್ಟು ಹೆಚ್ಚಿನ ರೈತ ಸಂಪರ್ಕ ಕೇಂದ್ರಗಳನ್ನು ತೆರೆಯುವ ಉದ್ದೇಶವಿದೆ? (ಇದ್ದಲ್ಲಿ, ಪೂರ್ಣ ವಿವರ ಸಲ್ಲಿಸುವುದು)

## ಬಿ.ಪಿ.ಎಲ್. ಸದಸ್ಯರಿಗೆ ಸದಸ್ಯತ್ವ ನೀಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೨೦೬ (೧೬೬೮) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಬಿ.ಪಿ.ಎಲ್. ಕುಟುಂಬದ ಸದಸ್ಯರನ್ನು ಸಂಘದ ಸದಸ್ಯರನ್ನಾಗಿ ಮಾಡಲು ಸರ್ಕಾರ ನೀಡಿರುವ ಮೊತ್ತವೆಷ್ಟು;

(ಆ) ರಾಜ್ಯದ ಯಾವ್ಯಾವ ಸಂಘಗಳಿಗೆ ಎಷ್ಟೆಷ್ಟು ಹಣ ನೀಡಲಾಗಿದೆ; ಆದೇಶ ಆದನಂತರ ಎಷ್ಟು ಬಿ.ಪಿ.ಎಲ್. ಸದಸ್ಯರಾಗಿರುತ್ತಾರೆ; (ಕ್ಷೇತ್ರವಾರು ವಿವರ ನೀಡುವುದು)

(ಇ) ಕೆಲವು ಸಂಘಗಳಲ್ಲಿ ಬಿ.ಪಿ.ಎಲ್. ಕಾರ್ಡುದಾರರನ್ನು ಸದಸ್ಯರನ್ನಾಗಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು;

(ಈ) ತುಮಕೂರು ಜಿಲ್ಲೆಯಲ್ಲಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳೆಷ್ಟು? (ತಾಲ್ಲೂಕುವಾರು, ಹೆಸರು ಮತ್ತು ವಿಳಾಸ ಸಹಿತ ವಿವರ ನೀಡುವುದು)

## ರಾಜ್ಯದಲ್ಲಿನ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿನ ದಿನಗೂಲಿ ನೌಕರರ ಹಾಗೂ ಪೌರಕಾರ್ಮಿಕರ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೦೭ (೧೫೨೯) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕರರುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಸಂಸ್ಥೆವಾರು ವಿವರ ನೀಡುವುದು)

(ಆ) ಇವರುಗಳ ಸೇವಾ ಖಾಯಂಯಾತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು, ಇಲ್ಲವಾದಲ್ಲಿ, ಕಾರಣವೇನು;

(ಇ) ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತ್‌ಗಳಲ್ಲಿ ಸೇವಾ ಖಾಯಂಯಾತಿ ಹೊಂದದೆ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು; ಮತ್ತು ಇವರುಗಳ ಸೇವಾ ಖಾಯಂಯಾತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು, ಇಲ್ಲವಾದಲ್ಲಿ ಕಾರಣವೇನು?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಸಿ.ಎ. ಸೈಟ್ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೨೦೮ (೧೬೩೨) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಪಟ್ಟಣ ಪಂಚಾಯತ್, ಪುರಸಭೆ ನಗರಸಭೆವಾರು ಖಾಲಿ ಸಿ.ಎ. ಸೈಟ್‌ಗಳ ಲೇಔಟ್‌ವಾರು ವಿವರ ನೀಡುವುದು;

(ಆ) ಯಾವ ಉದ್ದೇಶಕ್ಕಾಗಿ ಇವುಗಳನ್ನು ಹಂಚಿಕೆ ಮಾಡದೇ ಕಾಯ್ದಿರಿಸಲಾಗಿದೆ;

(ಇ) ಮುದ್ದೇಬಿಹಾಳ ಪುರಸಭೆಯಲ್ಲಿ ಕಳೆದ ೦೨ ವರ್ಷದಲ್ಲಿ ಯಾವ ಯಾವ ಯೋಜನೆಯಡಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ? (ಪ್ರತಿ ವಾರ್ಡ್‌ವಾರು ವಿವರ ನೀಡುವುದು)

## ಹಾಸನ ಬಿ.ಸಿ. ರೋಡ್ ರಾಷ್ಟ್ರೀಯ ಹೆದ್ದಾರಿ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೯ (೧೬೪೪) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯ ಸಕಲೇಶಪುರದ ಅಡ್ಡಹೊಳೆಯಿಂದ ದಕ್ಷಿಣ ಕನ್ನಡ ಜಿಲ್ಲೆಯ ಬಿ.ಸಿ. ರೋಡ್‌ನವರೆಗೆ ಚತುಷ್ಪಥ ರಸ್ತೆಯು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಮೂಲಕ ಮಂಜೂರಾಗಿದ್ದು, ಸದರಿ ರಸ್ತೆಯ ಒಟ್ಟು ಉದ್ದವೆಷ್ಟು; ಮತ್ತು ಯೋಜನಾ ವರದಿ ನೀಡುವುದು;

(ಆ) ಅಂಕುಡೊಂಕಾಗಿರುವ ರಸ್ತೆಯನ್ನು ಸರಿಪಡಿಸಲು ಯಾವ ರೀತಿಯ ಯೋಜನೆಯನ್ನು ರೂಪಿಸಿಕೊಂಡಿದೆ;

(ಇ) ಯೋಜನೆ ರೂಪಿಸಿಕೊಂಡಿದ್ದರೆ, ಯಾವಾಗ ಪ್ರಾರಂಭವಾಗುವುದು; ಮತ್ತು ಯಾವ ಗುತ್ತಿಗೆದಾರರಿಗೆ ನೀಡಲಾಗಿದೆ; ಸದರಿ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಮುಕ್ತಾಯಗೊಳಿಸಲಾಗುವುದು?

## ಸಹಕಾರ ಸಂಘಗಳಿಂದ ರೈತರಿಗೆ ಸಾಲ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧೦ (೧೭೧೦) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿರುವ ವ್ಯವಸಾಯ ಸಹಕಾರ ಸಂಘಗಳೆಷ್ಟು; ಇವುಗಳಿಗೆ ಸಾಲಕ್ಕಾಗಿ ಬಂದ ಅರ್ಜಿಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಡ್ಯ ಜಿಲ್ಲೆಯಲ್ಲಿ ಪ್ರತಿ ಸಹಕಾರ ಸಂಘಗಳಿಂದ ರೈತರಿಗೆ ನೀಡಿರುವ ಸಾಲದ ಮೊತ್ತವೇನು: (ತಾಲ್ಲೂಕುವಾರು ವಿವರ ನೀಡುವುದು)

(ಇ) ಸಾಲಕ್ಕಾಗಿ ಬಂದ ಅರ್ಜಿಗಳಲ್ಲಿ ಸಾಲ ಸಿಗದೇ ಇರುವ ರೈತರ ಸಂಖ್ಯೆ ಎಷ್ಟು; ಹಾಗಿದ್ದಲ್ಲಿ, ಕಾರಣಗಳೇನು; (ವಿವರ ನೀಡುವುದು)

(ಈ) ಈ ಹಿಂದೆ ಸಾಲ ಪಡೆದ ರೈತರಿಗೆ ಬೆಳೆ ಹಾನಿಯಾದ ರೈತರಿಗೆ ಸಾಲ ಮನ್ನಾ ಮಾಡಲಾಗಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು;

(ಉ) ಈ ಸಹಕಾರ ಸಂಘಗಳಿಂದ ರೈತರಿಗೆ ಯಾವ ಯಾವ ಸಾಲ ಸೌಲಭ್ಯ ನೀಡಲಾಗುತ್ತಿದೆ; (ವಿವರ ನೀಡುವುದು)

(ಊ) ಈಗ ನೀಡುತ್ತಿರುವ ಸಾಲದ ಮೊತ್ತವೇನು; ಈ ಮೊತ್ತವನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು?

**ಶ್ರೀನಿವಾಸ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

---

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. ಕಾಸೂ–258–1500 ಪ್ರತಿಗಳು (ಪಿ)